## ರಾಗ – ದರ್ಬಾರ್ : ತಾಳ – ಅಟತಾಳ

ನಮ್ಮಮ್ಮ ಶಾರದೇ ಉಮಾ ಮಹೇಶ್ವರಿ
ನಿಮ್ಮೊಳಗಿಹನಾರಮ್ಮ ।ಪ।
ಕಮ್ಮಗೋಲನವೈರಿ ಸುತನಾದ ಸೊಂಡಿಲ
ಹೆಮ್ಮೆಯ ಗಣನಾಥನೆ ಅಮ್ಮಯ್ಯ ।ಅ ಪ।
ಮೋರೆಕಪ್ಪಿನ ಭಾವ ಮೊರದಗಲ ಕಿವಿ
ಕೋರೆದಾಡೆಯನಿವನ್ಯಾರಮ್ಮ
ಮೂರು ಕಣ್ಣನಸುತ ಮುರಿದಿಟ್ಟ ಚಂದ್ರನ
ಧೀರ ತಾ ಗಣನಾಥನೇ ಅಮ್ಮಯ್ಯ ।೧।
ಉಟ್ಟದಟ್ಟಿಯು ಬಿಗಿದುಟ್ಟ ಚಲ್ಲಣದ
ದಿಟ್ಟ ತಾನಿವನ್ಯಾರಮ್ಮ
ಪಟ್ಟದ ರಾಣಿ ಪಾರ್ವತಿಯ ಕುಮಾರ
ಹೊಟ್ಟೆಯ ಗಣನಾಥನೆ ಅಮ್ಮಯ್ಯ ।೨।
ರಾಶಿವಿದ್ಯೆಯ ಬಲ್ಲ ರಮಣಿ ಹಂಬಲನೊಲ್ಲ
ಭಾಷಿಗನಿವನ್ಯಾರಮ್ಮ
ಲೇಸಾಗಿ ಸುಜನರ ಸಲಹುವ ನೆಲೆಯಾದಿ–
ಕೇಶವನ ದಾಸ ಕಣೇ ಅಮ್ಮಯ್ಯ ।೩।

ರಾ ಗ – ಕಾ ಂ ಬೋ ದಿ : ತಾ ಳ – ಅ ಟ ತಾ ಳ

ನಿನಗಿಂತ ಕುಂದೇನೊ ನಮ್ಮಮ್ಮ ಜಯಲಕ್ಷ್ಮಿ ? ।ಪ।

ಮತ್ಸ್ಯಾವತಾರ ನೀನಾದರೆ – ಆಕೆ
ಮತ್ಸ್ಯಗಂಗಳೆ ತಾನಾದಳೊ
ಹೆಚ್ಚಿನ ಶಂಖವ ಪಿಡಿದರೆ – ಆಕೆ
ನಿಚ್ಚ ಶಂಖದ ಕಂಠಳಾದಳಯ್ಯ ।೧।

ನೀಲವರ್ಣ ನೀನಾದರೆ – ಆಕೆ
ನೀಲಕುಂತಳೆ ತಾನಾದಳೊ
ಲೋಲಕಮಲನಾಭನಾದರೆ – ಆಕೆ
ಬಾಲಕಮಲಮುಖಿಯಾದಳಯ್ಯ ।೨।

ಬೆಟ್ಟವ ನೀನೊಂದು ಪೊತ್ತರೆ – ಕುಚದ
ಬೆಟ್ಟಗಳೆರಡುನು ತಾ ಪೊತ್ತಳೊ
ದಿಟ್ಟ ಶೇಷನ ನೀ ತುಳಿದರೆ – ಆಕೆ
ಕಟ್ಟಿ ಬಾಸೆಗೆ ಶೇಷನ ನಿಲಿಸಿಹಳಯ್ಯ ।೩।

ಗಜರಾಜವರದ ನೀನಾದರೆ – ಆಕೆ
ಗಜಗಮನೆಯು ತಾನಾದಳಯ್ಯ
ನಿಜವಾದ ಸಿಂಹ ನೀನಾದರೆ – ಆಕೆ
ಭಜಿಸಿ ಸಿಂಹಮಧ್ಯೆಯಾಗಿಪ್ಪಳಯ್ಯ ।೪।

ಈ ಪರಿಯಲಿ ಬಹು ಜನಿಸಿದೆ – ಭಲೆ
ಭಾಪುರೆ ಬಾಡದೊಳ್ ನೆಲೆಸಿದೆ
ಗೋಪಿಯರ ಮೋಹ ಸಲಿಸಿದೆ – ಚೆಲುವ
ಶ್ರೀಪತಿ ಆದಿಕೇಶವರಾಯ ಮೆರೆದೆ

# ಶ್ರೀ ಕನಕದಾಸವಿರಚಿತ ಕೇಶವನಾಮ

## ರಾಗ – ಮೋಹನ

ಈಶ ನಿನ್ನ ಚರಣ ಭಜನೆ ಆಶೆಯಿಂದ ಮಾಡುವೆನು
ದೋಷರಾಶಿ ನಾಶುಮಾಡು ಶ್ರೀಶ ಕೇಶವ । ಪ ।

ಶರಣು ಹೊಕ್ಕೆನಯ್ಯ ಎನ್ನ ಮರಣಸಮಯದಲಿ ನಿನ್ನ
ಚರಣ ಸ್ಮರಣೆ ಕರುಣಿಸಯ್ಯ ನಾರಾಯಣ । ೧ ।

ಶೋಧಿಸೆನ್ನ ಭವದ ಕಲುಷ ಬೋಧಿಸಯ್ಯ ಜ್ಞಾನವೆನಗೆ
ಬಾಧಿಸುವ ಯಮನ ಬಾಧೆ ಬಿಡಿಸು ಮಾಧವ । ೨ ।

ಹಿಂದನೇಕ ಯೋನಿಗಳಲಿ ಬಂದು ಬಂದು ನೊಂದೆನಯ್ಯ
ಇಂದು ಭವದಬಂಧ ಬಿಡಿಸು ತಂದೆ ಗೋವಿಂದ । ೩ ।

ಭ್ರಷ್ಟನೆನಿಸಬೇಡ ಕೃಷ್ಣ ಇಷ್ಟು ಮಾತ್ರ ಬೇಡಿಕೊಂಬೆ
ಶಿಷ್ಟರೊಡನೆ ಇಟ್ಟು ಕಷ್ಟ ಬಿಡಿಸು ವಿಷ್ಣುವೆ । ೪ ।

ಮೊದಲು ನಿನ್ನ ಪಾದಪೂಜೆ ಮುದದಿ ಮಾಡುವೆನ್ನೈ ನಾನು
ಹೃದಯದೊಳಗೆ ಹುದುಗಿಸಯ್ಯ ಮಧುಸೂದನ । ೫ ।

ಕವಿದುಕೊಂಡು ಇರುವ ಪಾಪ ಸವೆದುಪೋಗುವಂತೆ ಮಾಡು
ಜವನಬಾಧೆಯನ್ನು ಬಿಡಿಸು ತ್ರಿವಿಕ್ರಮ । ೬ ।

ಕಾಮಜನಕ ನಿನ್ನ ನಾಮ ಪ್ರೇಮದಿಂದ ಪಾಡುವಂಥ
ನೇಮವೆನಗೆ ಪಾಲಿಸಯ್ಯ ಸ್ವಾಮಿ ವಾಮನ । ೭ ।

ಮದನನಯ್ಯ ನಿನ್ನ ಮಹಿಮೆ ವದನದಲ್ಲಿ ಒದಗುವಂತೆ
ಹೃದಯದಲ್ಲಿ ಸದನ ಮಾಡು ಮುದದಿ ಶ್ರೀಧರ ।೮।

ಹುಸಿಯನಾಡಿ ಹೊಟ್ಟೆಹೊರೆವ ವಿಷಯದಲ್ಲಿ ರಸಿಕನೆಂದು
ಹುಸಿಗೆ ನೀನು ಹಾಕದಿರೊ ಹೃಷೀಕೇಶನೆ ।೯।
ಅಬ್ಧಿಯೊಳಗೆ ಬಿದ್ದು ನಾನು ಒದ್ದುಕೊಂಬೆನಯ್ಯ ಭವದಿ
ಗೆದ್ದು ಪೋಪ ಬುದ್ಧಿತೋರು ಪದ್ಮನಾಭನೆ ।೧೦।

ಕಾಮ ಕ್ರೋಧ ಬಿಡಿಸಿ ನಿನ್ನ ನಾಮ ಜಿಹ್ವೆಯೊಳಗೆ ನುಡಿಸು
ಶ್ರೀಮಹಾನುಭಾವನಾದ ದಾಮೋದರ ।೧೧।

ಪಂಕಜಾಕ್ಷ ಎನ್ನ ಮಂಕುಬುದ್ಧಿ ಬಿಡಿಸಿ ನಿನ್ನ
ಕಿಂಕರನ್ನ ಮಾಡಿಕೊಳ್ಳೊ ಸಂಕರುಷಣ ।೧೨।

ಏಸು ಜನ್ಮ ಬಂದರೇನು ದಾಸನಾಗಲಿಲ್ಲ ನಾನು
ಗಾಸಿ ಮಾಡದಿರು ಇನ್ನು ವಾಸುದೇವನೆ ।೧೩।

ಬುದ್ಧಿಶೂನ್ಯನಾಗಿ ನಾನು ಕದ್ದಕಳ್ಳನಾದೆ ಎನ್ನ
ತಿದ್ದಿ ಹೃದಯ ಶುದ್ಧ ಮಾಡು ಪ್ರದ್ಯುಮ್ನನೆ ।೧೪।

ಜನನಿ ಜನಕ ನೀನೆಯೆಂದು ಎನುವೆನಯ್ಯ ದೀನಬಂಧು
ಎನಗೆ ಮುಕ್ತಿ ಪಾಲಿಸಿಂದು ಅನಿರುದ್ಧನೆ ।೧೫।

ಹರುಷದಿಂದ ನಿನ್ನ ನಾಮ ಸ್ಮರಿಸುವಂತೆ ಮಾಡು ಪ್ರೇಮ
ಇರಿಸು ನಿನ್ನ ಚರಣದಲ್ಲಿ ಪುರುಷೋತ್ತಮ ।೧೬।

ಸಾಧುಸಂಗ ಕೊಟ್ಟು ನಿನ್ನ ಪಾದಭಜಕನೆನಿಸು ಎನ್ನ
ಭೇದ ಮಾಡಿ ನೋಡದಿರು ಹೇ ಅಧೋಕ್ಷಜ ।೧೭।

ಚಾರುಚರಣ ತೋರಿ ಎನಗೆ ಪಾರುಗಾಣಿಸಯ್ಯ ಕೊನೆಗೆ
ಭಾರ ಹಾಕಿರುವೆ ನಿನಗೆ ನಾರಸಿಂಹನೆ । ೧೮ ।

ಸಂಚಿತಾರ್ಥ ಪಾಪಗಳನು ಕಿಂಚಿತಾದರಿಲ್ಲದಂತೆ
ಮುಂಚಿತಾಗಿ ಕಳೆಯಬೇಕು ಸ್ವಾಮಿ ಅಚ್ಯುತ । ೧೯ ।

ಜ್ಞಾನಭಕ್ತಿ ಕೊಟ್ಟು ನಿನ್ನ ಧ್ಯಾನದಲ್ಲಿ ಇಟ್ಟು ಎನ್ನ
ಹೀನಬುದ್ಧಿ ಬಿಡಿಸೊ ಮುನ್ನ ಜನಾರ್ದನ । ೨೦ ।

ಜಪತಪಾನುಷ್ಠಾನ ನೀನು ಒಪ್ಪುವಂತೆ ಮಾಡಲಿಲ್ಲ
ತಪ್ಪು ಕೋಟಿ ಕ್ಷಮಿಸಬೇಕು ಉಪೇಂದ್ರನೆ । ೨೧ ।

ಮೊರೆಯ ಇಡುವೆನಯ್ಯ ನಿನಗೆ ಸೆರೆಯ ಬಿಡಿಸು ಭವದ ಎನಗೆ
ಇರಿಸು ಭಕ್ತರೊಳಗೆ ಪರಮ ಪುರುಷ ಶ್ರೀಹರೆ । ೨೨ ।

ಪುಟ್ಟಿಸಲೇಬೇಡವಿನ್ನು ಪುಟ್ಟಿಸಿದಕೆ ಪಾಲಿಸಿನ್ನು
ಇಷ್ಟು ಮಾತ್ರ ಬೇಡಿಕೊಂಬೆ ಶ್ರೀಕೃಷ್ಣನೆ । ೨೩ ।

ಸತ್ಯವಾದ ನಾಮಗಳನು ನಿತ್ಯದಲಿ ಪಠಿಸುವರಿಗೆ
ಅರ್ತಿಯಿಂದ ಸಲಹುವ ಕರ್ತೃ ಕೇಶವ । ೨೪ ।

ಮರೆಯದಲೆ ಹರಿಯನಾಮ ಬರೆದು ಓದಿ ಕೇಳುವರಿಗೆ
ಕರೆದು ಮುಕ್ತಿ ಕೊಡುವ ನೆಲೆಯಾದಿಕೇಶವ । ೨೫ ।

ಸಂಗ್ರಹ – ನರಹರಿಸುಮಧ್ವ